ದಿನಾಂಕ: 07.11.2020 ರಂದು ಮಧ್ಯಾಹ್ನ 2.30 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ,** ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀಮತಿ ರೇಷ್ಮಾ.ಸಿ.ಎಸ್. ಸಹಾಯಕ ಅಭಿಯಂತರರು, ಪಶ್ಚಿಮ ವಲಯ
3. ಶ್ರೀ ಹರೀಶ್ ನಾಯಕ್.ಬಿ. ಸಹಾಯಕ ಅಭಿಯಂತರರು , ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ ಆನಂದ್. ಸಹಾಯಕ ಅಭಿಯಂತರರು , ಬೆಸ್ಕಾಂ,
5. ಶ್ರೀ ಹೆಚ್.ಎನ್. ನರಸಿಂಹಯ್ಯ. ಎ.ಎಸ್.ಐ. ವಿಜಯನಗರ ಸಂಚಾರಿ ಪೋಲಿಸ್ ಠಾಣೆ
6. ಶ್ರೀ ರಾಜಣ್ಣ, ಎ.ಎಸ್.ಐ. ಬಸವೇಶ್ವರನಗರ ಪೊಲಿಸ್ ಠಾಣೆ,
7. ಶ್ರೀ ರಾಮಯ್ಯ, ಎ.ಎಸ್.ಐ. ರಾಜಾಜಿನಗರ ಪೋಲಿಸ್ ಠಾಣೆ
8. ಶ್ರೀ ಶಿವಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು
9. ಶ್ರೀ ರಮೇಶ್.ಎಸ್.ಟಿ. ಪಶು ಸಂಘೋಪನ ಇಲಾಖೆ,
10. ಶ್ರೀ ಕೆ.ಬಿ. ನಾಗರಾಜ್, ಎ.ಎಸ್.ಐ, ಬಸವೇಶ್ವರನಗರ ಪೋಲಿಸ್ ಠಾಣೆ
11. ಶ್ರೀ ರವಿ, ಕಂದಾಯ ವಸೂಲಿಗಾರರು, ವಾರ್ಡ್ ನಂ. 107
12. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 107/ಶಿವನಗರ
13. ಶ್ರೀ ವಿಶಾಲ್ , ಮಾರ್ಷಲ್
14. ಶ್ರೀ ಎನ್.ಹೆಚ್.ನಾಗರಾಜ್, ತೋಟಗಾರಿಕೆ ಇಲಾಖೆ

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ತಿಮ್ಮಯ್ಯ ರಸ್ತೆಯಲ್ಲಿ ಮರದ ಕೊಂಬೆಗಳು ಒಣಗಿದ್ದು, ರಸ್ತೆಯಲ್ಲಿ ಓಡಾಡುವ ವಾಹನ ಸವಾರರ ಮೇಲೆ ಬೀಳುವ ಸಂಭವವಿರುತ್ತದೆ ಎಂದು ಸಭೆಯಲ್ಲಿ ಹಾಜರಿದ್ದ ಶ್ರೀ ವಿಜಯಕುಮಾರ್ ರವರು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಶ್ರೀನಾಥ್, ಅರಣ್ಯ ಅಧಿಕಾರಿಗಳು ಸದರಿ ಸ್ಥಳವನ್ನು ಪರಿಶೀಲಿಸಿ, ಒಣಗಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವುದಾಗಿ ತಿಳಿಸಿದರು.

2. ತಿಮ್ಮಯ್ಯ ರಸ್ತೆ, ಕಾರ್ಮಲ್ ಶಾಲೆಯ ಎದುರು ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಿದ್ದು, ಇಲ್ಲಿಯವರೆಗೂ ರಸ್ತೆಯನ್ನು ದುರಸ್ಥಿಪಡಿಸದೆ ಇರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ ಎಂದು ಶ್ರೀ ಕೇಶವ ಮೂರ್ತಿ ಎಂಬುವವರು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ, ಬೆಸ್ಕಾಂ ಎಇ ರವರಾದ ಶ್ರೀ ಆನಂದ್ ರವರು ಸದರಿ ರಸ್ತೆಯ ಕೇಬಲ್ ಅಳವಡಿಸುವ ಕಾಮಗಾರಿಯು ಪ್ರಗತಿಯಲಿದ್ದು, ಕಾಮಗಾರಿ ಮುಕ್ತಾಯಗೊಂಡ ನಂತರ ಕತ್ತರಿಸುವ ರಸ್ತೆಯನ್ನು ದುರಸ್ಥಿಪಡಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಅನ್ನಪೂರ್ಣೇಶ್ವರಿ ಹೋಟೆಲ್ ರವರು ವಾಶ್ ಬೇಸಿನ್‌ನ್ನು ಪಾದಚಾರಿ ಮಾರ್ಗದಲ್ಲಿ ಅಳವಡಿಸಿರುವುದರಿಂದ ಗ್ರಾಹಕರು ಊಟ ಮಾಡಿದ ನಂತರ ಕೈತೊಳೆದ ನೀರು ರಸ್ತೆಯಲ್ಲಿ ಹರಿಯುತ್ತಿರುವುದರಿಂದ ಈ ಕೂಡಲೇ ವಾಶ್ ಬೇಸನನ್ನು ತೆರವುಗೊಳಿಸಲು ಹಾಗೂ ಹೋಟೆಲ್ ಮಾಲೀಕರ ವಿರುದ್ದ ಕ್ರಮ ಕೈಗೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು. ಇದಕ್ಕೆ ಉತ್ತರವಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಪು.ತಿ.ನೋ

Scanned by CamScanner

4. ಪಶ್ಚಿಮ ಕಾರ್ಡ್ ರಸ್ತೆಯಲ್ಲಿ ಹಾದು ಹೋಗಿರುವ ಮೇಲುಸೇತುವೆಯ ಕೆಳ ಭಾಗದಲ್ಲಿ ಜಲ್ಲಿ ಮರಳು ತುಂಬಿರುವ ಲಾರಿಗಳನ್ನು ಪಾರ್ಕಿಂಗ್ ಮಾಡುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ ಎಂದು ಶ್ರೀ ರಂಗನಾಥ್ ಎಂಬುವವರು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ವಿಜಯನಗರ ಸಂಚಾರಿ ಠಾಣೆಯ ಎ.ಎಸ್.ಐ. ರವರು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

5. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಮೋಟಪ್ಪ ಪಾರ್ಕಿನಲ್ಲಿರುವ ಬ್ಯಾಡ್ ಮಿಂಟನ್ ಕೋರ್ಟ್ ಬಳಿ ಸಾರ್ವಜನಿಕರು ಕಸವನ್ನು ಹಾಕುತ್ತಿದ್ದು, ಇದರ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

6. ಸಹಾಯಕ ಅಭಿಯಂತರರು, ದೊಡ್ಡ ಮಳೆ ನೀರುಗಾಲುವೆ ರವರು ಮಾತನಾಡುತ್ತಾ, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಒಳಚರಂಡಿಯ ನೀರನ್ನು ದೊಡ್ಡ ಮಳೆ ನೀರು ಚರಂಡಿಗೆ ಬಿಡುತ್ತಿದ್ದು, ಇದು NGT ನ್ಯಾಯಾಲಯದ ಆದೇಶಕ್ಕೆ ವಿರುದ್ದವಾಗಿರುವುದರಿಂದ ಒಳಚರಂಡಿ ನೀರನ್ನು ದೊಡ್ಡ ಮಳೆ ನೀರು ಚರಂಡಿಗೆ ಬಿಡಬಾರದೆಂದು ತಿಳಿಸಿದರು. ಇದಕ್ಕೆ ಉತ್ತರವಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

7. ಸಿದ್ದಗಂಗಾ ಶಾಲೆಯ ರಸ್ತೆಯಲ್ಲಿ ಒಳಚರಂಡಿಯ ಮ್ಯಾನ್ ಹೋಲ್ ನಿಂದ ನೀರು ರಸ್ತೆಗೆ ಹರಿಯುತ್ತಿರುವುದರಿಂದ ಸಾರ್ವಜನಿಕರಿಗೆ ಹಾಗೂ ಸ್ಥಳೀಯ ನಿವಾಸಿಗಳಿಗೆ ಓಡಾಡಲು ಕಷ್ಟವಾಗುತ್ತಿದೆ ಎಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತಿಳಿಸಿದರು. ಇದಕ್ಕೆ ಉತ್ತರವಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

Scanned by CamScanner